ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 11.10.2022

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 12-10-2022 ರಿಂದ 16-10-2022 ವರೆಗೆ)

| ನಿಯತಾಂಕಗಳು | 12.10.2022 | 13.10.2022 | 14.10.2022 | 15.10.2022 | 16.10.2022 |
|---|---|---|---|---|---|
| ಮಳೆ (ಮಿ ಮಿ) | 8 | 16 | 9 | 9 | 8 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 26 | 26 | 26 | 26 | 26 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 18 | 18 | 18 | 18 | 18 |
| ಮೋಡ ( ಪ್ರಮಾಣ) | 8 | 8 | 8 | 8 | 7 |
| ಅರ್ದ್ರತೆ 7.20 ಬೆ (ಶೇ) | 92 | 93 | 91 | 91 | 93 |
| ಅರ್ದ್ರತೆ 2.20 ಮ (ಶೇ) | 75 | 75 | 77 | 77 | 77 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 3 | 3 | 3 | 4 |
| ಗಾಳಿಯ ದಿಕ್ಕು ( ಡಿಗ್ರಿ) | 207 | 68 | 255 | 68 | 112 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆ ಇದೆ.. ದಿನದ ಗರಿಷ್ಠ ಉಷ್ಣಾಂಶ **26.0$^o$ C** ಮತ್ತು ಕನಿಷ್ಠ **18.0$^o$ C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **91-93 %** ಇದ್ದು ಮಧ್ಯಾಹ್ನ **75-77 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2–4** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

**"ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ!"**

- ಚಿತ್ತ ನಕ್ಷತ್ರದ ಮಳೆಯ ಕಾಲವು ಅಕ್ಟೋಬರ್ ತಿಂಗಳ 11 ರಿಂದ ಅಕ್ಟೋಬರ್ 23 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 55.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ರಾಗಿ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಅಂತರ ಬೇಸಾಯ ಮಾಡಿ ಕಳೆ ನಿರ್ಮೂಲನೆ ಮಾಡಿ .<br>2. ತೊಗರಿ ಬೆಳೆಯಲ್ಲಿ ಅಂತರ ಬೇಸಾಯ ಮಾಡಿ. |
| ಮುಂಗಾರು ಬೆಳೆಗಳು | ಬೆಳವಣಿಗೆ ಹಂತ/ ಹೂವಿನ ಹಂತ/ ಮಾಗುವ ಹಂತ | **ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ರಾಗಿ: ಕೆ.ಎಮ್,ಆರ್-301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್-365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು. |
| ಮಾವು | | 1. ಮಾವಿನ ತೋಪುಗಳಲ್ಲಿ ಒಣ ರೆಂಬೆ ಕೊಂಬೆಗಳನ್ನು ಕತ್ತರಿಸಿ ಹೊರಹಾಕಿ.<br>2. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| | | **ಹೈನುಗಾರಿಕೆ** |
| | | |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ-ಪಶ್ಚಿಮಕ್ಕೆ |

| | |
|---|---|
| | ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಉತ್ತಮ ಮಳೆ ಮತ್ತು ತೇವಾಂಶದ ಆಧಾರದಲ್ಲಿ ಯತೇಚ್ಚ ಹುಲ್ಲು ಮತ್ತು ಮೇವು ಲಭ್ಯವಿರುವುದರಿಂದ ಹೈನುಗಾರಿಕೆ ಬಲವರ್ಧನೆಗೆ ತುಂಬಾ ಸಹಕಾರಿಯಾಗುತ್ತದೆ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.